# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 18
ಸದಸ್ಯರ ಹೆಸರು : ಶ್ರೀ ಎಸ್.ರವಿ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 12.09.2022
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಮನಗರ ಜಿಲ್ಲೆಯ ಕನಕಪುರ ತಾಲ್ಲೂಕು ಸಾತನೂರು ಹೋಬಳಿಯ ತೆಂಗನಾಯಕನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠಶಾಲೆಯ ಕಟ್ಟಡ ಮತ್ತು ಕಾಂಪೌಂಡ್ ಶಿಥಿಲಗೊಂಡು ಕುಸಿದು ಬೀಳುವ ಹಂತಕ್ಕೆ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವುಗಳ ದುರಸ್ಥಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ಈ ಶಾಲೆಯ ನವೀಕರಣ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು. (ವಿವರ ನೀಡುವುದು) | ಬಂದಿದೆ.<br>ತೆಂಗನಾಯಕನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠಶಾಲೆಯ ಕಟ್ಟಡವು ಶಿಥಿಲಾವಸ್ಥೆಯಲ್ಲಿರುವುದರಿಂದ ವಿದ್ಯಾರ್ಥಿಗಳನ್ನು ಪಕ್ಕದಲ್ಲಿರುವ ಅನುದಾನಿತ ಶಾಲಾ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ.<br>2022-23ನೇ ಸಾಲಿನಲ್ಲಿ ರಾಜ್ಯ ವಲಯ ಮುಂದುವರೆದ ಕಾರ್ಯಕ್ರಮದ ವಿವೇಕ ಯೋಜನೆಯಡಿ ಸದರಿ ಶಾಲೆಗೆ ರೂ.13.90ಲಕ್ಷ ವೆಚ್ಚದಲ್ಲಿ 01 ಕೊಠಡಿಯನ್ನು ನಿರ್ಮಾಣ ಮಾಡಲು ಅಗತ್ಯ ಕ್ರಮವಹಿಸಲಾಗಿದೆ.ಸದರಿ ಶಾಲೆಗೆ ನರೇಗ ಯೋಜನೆಯಡಿ ಕಾಂಪೌಂಡ್ ನಿರ್ಮಾಣ ಮಾಡಲು ಕೋರಲಾಗಿದ್ದು, ಶೀಘ್ರವಾಗಿ ಕಾಂಪೌಂಡ್ ನಿರ್ಮಾಣಕ್ಕಾಗಿ ಅಗತ್ಯ ಕ್ರಮವಹಿಸಲಾಗಿದೆ. |
| ಆ) | ರಾಮನಗರ ಜಿಲ್ಲೆಯ ಮಾಗಡಿ ಟೌನ್‌ನ ಹಳೆ ಮಸೀದಿ ಮೊಹಲ್ಲಾದಲ್ಲಿರುವ ಸರ್ಕಾರಿ ಉರ್ದು ಎನ್.ಟಿ.ಜಿ.ಎಂ.ಎಸ್ ಪಾಠಶಾಲೆಯ ಕಟ್ಟಡ ಶಿಥಿಲಗೊಂಡು ಶಾಲಾ ಕಟ್ಟಡ ಕುಸಿದು ಬೀಳುವ ಹಂತಕ್ಕೆ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವುಗಳ ದುರಸ್ಥಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ಈ ಶಾಲೆಯ ನವೀಕರಣ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು? (ವಿವರ ನೀಡುವುದು) | ಬಂದಿದೆ.<br>ಸರ್ಕಾರಿ ಉರ್ದು ಎನ್.ಟಿ.ಜಿ.ಎಂ.ಎಸ್.ಪಾಠ ಶಾಲೆ ಹಳೆ ಮಸೀದಿ ಮೊಹಲ್ಲಾ ಮಾಗಡಿ ಟೌನ್, ಮಾಗಡಿ ತಾಲ್ಲೂಕು ಈ ಶಾಲೆಗೆ 2022-23 ನೇ ಸಾಲಿನಲ್ಲಿ ರಾಜ್ಯ ವಲಯ ಮುಂದುವರೆದ ಕಾರ್ಯಕ್ರಮದ ವಿವೇಕ ಯೋಜನೆಯಡಿ ರೂ.13.90ಲಕ್ಷ ವೆಚ್ಚದಲ್ಲಿ 01 ಕೊಠಡಿಯನ್ನು ನಿರ್ಮಾಣ ಮಾಡಲು ಅಗತ್ಯ ಕ್ರಮವಹಿಸಲಾಗಿದೆ. ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಶೀಘ್ರವಾಗಿ ಕಾಮಗಾರಿಗಳನ್ನು ಪ್ರಾರಂಭಿಸಲು ಅಗತ್ಯ ಕ್ರಮವಹಿಸಲಾಗಿದೆ. |

ಇಪಿ:267 ಯೋಸಕ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು